ಚಿಕ್ಕಬಳ್ಳಾಪುರದಲ್ಲಿ ನಿರ್ಮಾಣವಾಗುತ್ತಿರುವ ರಂಗಮಂದಿರ

215(589); ಶ್ರೀ ಡಾ॥ ಸುಧಾಕರ್ ಕೆ. (ಚಿಕ್ಕಬಳ್ಳಾಪುರ)

ಅ) ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ ನಿರ್ಮಾಣವಾಗುತ್ತಿರುವ ರಂಗಮಂದಿರಕ್ಕೆ ಸರ್ಕಾರ ನೀಡಿರುವ ಅನುದಾನದ ಮೊತ್ತವೆಷ್ಟು;

ಆ) ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿದ್ದರು ಇದುವರೆಗೂ ರಂಗಮಂದಿರ ನಿರ್ಮಾಣ ಕಾರ್ಯ ಪ್ರಾರಂಭ ಆಗದಿರುವುದಕ್ಕೆ ಕಾರಣವೇನು;

ಇ) ಚಿಕ್ಕಬಳ್ಳಾಪುರ ನಗರವು ಜಿಲ್ಲಾ ಕೇಂದ್ರವಾಗಿರುವುದರಿಂದ ಇಲಾಖೆಯಿಂದ ಹೆಚ್ಚಿನ ಅನುದಾನ ನೀಡಲು ಸರ್ಕಾರಕ್ಕೆ ಇರುವ ಅಡಚಣೆ ಏನು;

ಈ) ನಿರ್ಮಾಣವಾಗುತ್ತಿರುವ ರಂಗಮಂದಿರವನ್ನು 1000 ಆಸನದಿಂದ 1500 ಆಸನಕ್ಕೆ ವಿಸ್ತರಿಸಲಾಗುವುದೇ?

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ ನಿರ್ಮಾಣವಾಗುತ್ತಿರುವ ಜಿಲ್ಲಾ ರಂಗಮಂದಿರ ನಿರ್ಮಾಣ ಕಾರ್ಯಕ್ಕೆ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳಿಗೆ ರೂ. 1.00 ಕೋಟಿ ಬಿಡುಗಡೆ ಮಾಡಲಾಗಿದೆ.

ಆ) ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ರೂ. 4.00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ರೂ. 1.00 ಕೋಟಿ ಅನುದಾನವನ್ನು ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ಇವರಿಗೆ ಬಿಡುಗಡೆ ಮಾಡಲಾಗಿದೆ. ಉಳಿದ ಅನುದಾನವನ್ನು ಹಂತ ಹಂತವಾಗಿ ನೀಡಲು ಕ್ರಮ ಕೈಗೊಳ್ಳಲಾಗುವುದು.

ಈ) ಕಾಮಗಾರಿ ನಿರ್ಮಾಣ ಕಾರ್ಯ ಕೈಗೆತ್ತಿಕೊಂಡಿರುವುದಿಲ್ಲ. ಈ ಬಗ್ಗೆ ಜಿಲ್ಲಾಧಿಕಾರಿಗಳು ಪ್ರಸ್ತುತ ಸಿದ್ಧಪಡಿಸಿರುವ ನೀಲಿನಕ್ಷೆಯನ್ನು ಪರಿಶೀಲಿಸಿ ಆಸನದ ಸಂಖ್ಯೆ ವಿಸ್ತರಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

ಸಾಂಸ್ಕೃತಿಕ ಭವನಗಳ ಮಂಜೂರಾತಿ

218(595); ಡಾ॥ ಉಮೇಶ್ ಜಿ. ಜಾಧವ್ (ಚಿಂಚೋಳಿ)

1) ಚಿಂಚೋಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಹೋಬಳಿ ಮತ್ತು ಗ್ರಾಮಗಳಲ್ಲಿ ಸಾಂಸ್ಕೃತಿಕ ಚಟುವಟಿಕೆ, ಸಭೆ ಸಮಾರಂಭಗಳನ್ನು ನಡೆಸಲು ಸಾಂಸ್ಕೃತಿಕ ಭವನಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

2) ಹಾಗಿದ್ದಲ್ಲಿ, ಅದು ಯಾವ ಹಂತದಲ್ಲಿದೆ (ವಿವರ ನೀಡುವುದು)

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

1) ಇದೆ.

2) ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಅಂಗನವಾಡಿಗಳ ಕಟ್ಟಡ ನಿರ್ಮಾಣ ಕಾಮಗಾರಿ

221(460); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆಗೆ ಎಷ್ಟು ಅಂಗನವಾಡಿ ಕೇಂದ್ರಗಳು ಮಂಜೂರಾಗಿವೆ; ಇವುಗಳಲ್ಲಿ ಎಷ್ಟು ಸ್ವಂತ ಕಟ್ಟಡಗಳನ್ನು ಹೊಂದಿವೆ; ಎಷ್ಟು ಬಾಡಿಗೆ ಕಟ್ಟಡಗಳನ್ನು ಹೊಂದಿವೆ (ವಿವರ ನೀಡುವುದು);

ಆ) ಈ ಅಂಗನವಾಡಿಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಎಷ್ಟು ಅನುದಾನ ಮಂಜೂರಾಗಿದೆ; ಎಷ್ಟು ವೆಚ್ಚ ಮಾಡಲಾಗಿದೆ; (ವಿವರ ನೀಡುವುದು);